# ಕರ್ನಾಟಕ ಸರ್ಕಾರದ ನಡವಳಿಗಳು

ರೇಷ್ಮೆ ಕೃಷಿ ಅಭಿವೃದ್ಧಿ ಆ...
ಹಾಗು ರೇಷ್ಮೆ ನಿರ್ದೇ...
ದಿನಾಂಕ 26/8/16

ವಿಷಯ: 2016-17ನೇ ಸಾಲಿನ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆ ಕಾರ್ಯಕ್ರಮ ಅನುಷ್ಠಾನಕ್ಕೆ ಅನುದಾನ ಬಿಡುಗಡೆ ಕುರಿತು.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ತೋಇ 75 ರೇಕೃವಿ 2015, ದಿನಾಂಕ 10-05-2016
2) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: F.No. 20-12/2016-Hort, ದಿನಾಂಕ 25-05-2016
3) ಸರ್ಕಾರದ ಆದೇಶ ಸಂಖ್ಯೆ: ತೋಇ 54 ಹೆಚ್‌ಪಿಸಿ 2016, ದಿನಾಂಕ 19-07-2016
4) ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರ ಪತ್ರ ಸಂಖ್ಯೆ: ಯೋ/ಪಿಎಸ್-3 /PMKSY/ಅನು/28/2016-17, ದಿನಾಂಕ 26-07-2016/06-08-2016
5) ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: ಎಫ್‌ಡಿ 44 ಬಿಜಿಎಲ್ 2016, ದಿನಾಂಕ 28-05-2016

JD (plan)

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ 10-05-2016ರ ಆದೇಶದಲ್ಲಿ 2016-17ನೇ ಸಾಲಿನ ರೇಷ್ಮೆ ಇಲಾಖೆಯ ವಾರ್ಷಿಕ ಯೋಜನೆಯಡಿ ಚಾಲ್ತಿಯಲ್ಲಿರುವ ರಾಜ್ಯ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಆಯವ್ಯಯದಲ್ಲಿ ರೂ. 25334.00 ಲಕ್ಷಗಳನ್ನು ಒದಗಿಸಲಾಗಿದ್ದು, 06 ಮಾರ್ಪಾಡಿಲ್ಲದ ವಿವಿಧ ಕಾರ್ಯಕ್ರಮಗಳ ಯೋಜನೆಗಳನ್ನು 2016-17ನೇ ಸಾಲಿಗೆ ಮುಂದುವರೆಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ 25-05-2016ರ ಪತ್ರಗಳಲ್ಲಿ 2016-17ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆ ಯೋಜನೆ ಸಾಮಾನ್ಯ, ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅಡಿ ಕ್ರಮವಾಗಿ ಮೊದಲ ಕಂತಾಗಿ ರೂ. 5850.00 ಲಕ್ಷ, ರೂ. 1404.00 ಲಕ್ಷ ಮತ್ತು ರೂ. 546.00 ಲಕ್ಷಗಳು ಅಂದರೆ ಒಟ್ಟು ರೂ. 7800.00 ಲಕ್ಷಗಳನ್ನು ಕೇಂದ್ರ ಸರ್ಕಾರವು ಬಿಡುಗಡೆ ಮಾಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರ ದಿನಾಂಕ 19-07-2016ರ ಆದೇಶದಲ್ಲಿ ರೇಷ್ಮೆ ಇಲಾಖೆಗೆ 2016-17ನೇ ಸಾಲಿಗೆ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆಗೆ ಕೇಂದ್ರದ ಪಾಲು ರೂ. 910.00 ಲಕ್ಷ ಹಾಗೂ ರಾಜ್ಯದ ಪಾಲು ರೂ. 1686.06 ಲಕ್ಷ ಒಟ್ಟಾರೆ ರೂ. 2596.06 ಲಕ್ಷಗಳ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4)ರ ದಿನಾಂಕ 26-07-2016/06-08-2016 ರ ಪತ್ರದಲ್ಲಿ 2016-17ನೇ ಸಾಲಿನಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆ ಕಾರ್ಯಕ್ರಮ ಅನುಷ್ಠಾನ ಮಾಡಲು ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ದಿನಾಂಕ 10-05-2016ರ ಆದೇಶದಲ್ಲಿ ಇಲಾಖೆಯ ಮುಂದುವರೆದ ಯೋಜನೆಗಳಡಿ ಲೆಕ್ಕ ಶೀರ್ಷಿಕೆ 2851-00-107-1-49 (106) ರಡಿ ರೂ. 2951.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. 2016-17ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆ ಯೋಜನೆಯ ಅನುಷ್ಠಾನಕ್ಕಾಗಿ ಸಾಮಾನ್ಯ, ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅಡಿ ಕ್ರಮವಾಗಿ ಮೊದಲ ಕಂತಾಗಿ ರೂ. 5850.00 ಲಕ್ಷ, ರೂ. 1404.00 ಲಕ್ಷ ಮತ್ತು ರೂ. 546.00 ಲಕ್ಷಗಳು ಅಂದರೆ ಒಟ್ಟು ರೂ. 7800.00 ಲಕ್ಷಗಳನ್ನು ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುತ್ತದೆ. ಸರ್ಕಾರದ ಆದೇಶ ದಿನಾಂಕ 19-07-2016ರಲ್ಲಿ ರೇಷ್ಮೆ ಇಲಾಖೆಗೆ 2016-17ನೇ ಸಾಲಿನ ಹನಿ ನೀರಾವರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ರೂ. 910.00 ಲಕ್ಷ ಹಾಗೂ ರಾಜ್ಯದ ಪಾಲಾಗಿ ರೂ. 1686.06 ಲಕ್ಷ ಅಂದರೆ ಒಟ್ಟು ರೂ. 2596.06 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮು.ತಿ.ನೋ....

ಆದ್ದರಿಂದ, ರೇಷ್ಮೆ ಇಲಾಖೆಗೆ ಶೇ. 7 % ರಷ್ಟು ಕೇಂದ್ರದ ಪಾಲು ರೂ. 546.00 ಲಕ್ಷಗಳನ್ನು ಬಿಡುಗಡೆ ಮಾಡಿರುವುದರಿಂದ ಅದಕ್ಕೆ ರಾಜ್ಯದ ಪಾಲು ರೂ. 1011.636 ಲಕ್ಷಗಳು ಸೇರಿ ಒಟ್ಟು ರೂ. 1557.636 ಲಕ್ಷಗಳನ್ನು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (PMKSY) ಯ ಅನುಷ್ಠಾನಕ್ಕಾಗಿ ಈ ಕೆಳಕಂಡಂತೆ ಮೊದಲ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ವರ್ಗಗಳು | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
|---|---|---|---|
| ಸಾಮಾನ್ಯ | 409.50 | 758.727 | 1168.227 |
| ಪರಿಶಿಷ್ಟ ಜಾತಿ | 98.28 | 182.094 | 280.374 |
| ಪರಿಶಿಷ್ಟ ಪಂಗಡ | 38.88 | 70.815 | 109.035 |
| ಒಟ್ಟು | 546.00 | 1011.636 | 1557.636 |

ಮೇಲೆ ಓದಲಾದ ಕ್ರಮ ಸಂಖ್ಯೆ: (5)ರ ದಿನಾಂಕ 28-05-2016ರ ಪತ್ರಗಳಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಲ್ಪಟ್ಟ ರೂ. 5850.00 ಲಕ್ಷ, ರೂ. 1404.00 ಲಕ್ಷ ಮತ್ತು ರೂ. 546.00 ಲಕ್ಷಗಳನ್ನು ರಾಜ್ಯದ ಖಜಾನೆಗೆ ಜಮೆಯಾಗಿದೆ ಎಂದು ಆರ್ಥಿಕ ಇಲಾಖೆಯು ದೃಢೀಕರಿಸಿದೆ.

ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, 2016-17ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಕೇಂದ್ರದ ಪಾಲು ರೂ. 546.00 ಲಕ್ಷ ಹಾಗೂ ರಾಜ್ಯದ ಪಾಲು ರೂ. 1011.636 ಲಕ್ಷ ಅಂದರೆ ಒಟ್ಟು ರೂ. 1557.636 ಲಕ್ಷಗಳನ್ನು ಯೋಜನಾ ಲೆಕ್ಕ ಶೀರ್ಷಿಕೆ 2851-00-107-1-49 (106) ರಡಿ ಮೊದಲ ಕಂತಾಗಿ ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ತೋಇ 145 ರೇಕೃವಿ 2016,**
**ಬೆಂಗಳೂರು, ದಿನಾಂಕ : 26-08-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ರೇಷ್ಮೆ ಇಲಾಖೆಗೆ 2016-17ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಕೆ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಈ ಕೆಳಕಂಡಂತೆ ಕೇಂದ್ರದ ಪಾಲು ರೂ. 546.00 ಲಕ್ಷ ಹಾಗೂ ರಾಜ್ಯದ ಪಾಲು ರೂ. 1011.636 ಲಕ್ಷ ಅಂದರೆ ಒಟ್ಟು ರೂ. 1557.636 ಲಕ್ಷ (ಒಂದು ಸಾವಿರದ ಐದು ನೂರ ಐವತ್ತೇಳು ಲಕ್ಷಗಳು ಮತ್ತು ಅರವತ್ಮೂರು ಸಾವಿರದ ಆರು ನೂರು ರೂಪಾಯಿಗಳು ಮಾತ್ರ) ಗಳನ್ನು ಮೊದಲ ಕಂತಾಗಿ ಸರ್ಕಾರವು ಬಿಡುಗಡೆ ಮಾಡಿ ಆದೇಶಿಸಿದೆ.

(ರೂ. ಲಕ್ಷಗಳಲ್ಲಿ)

| ವರ್ಗಗಳು | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
|---|---|---|---|
| ಸಾಮಾನ್ಯ | 409.50 | 758.727 | 1168.227 |
| ಪರಿಶಿಷ್ಟ ಜಾತಿ | 98.28 | 182.094 | 280.374 |
| ಪರಿಶಿಷ್ಟ ಪಂಗಡ | 38.88 | 70.815 | 109.035 |
| ಒಟ್ಟು | 546.00 | 1011.636 | 1557.636 |

ಈ ವೆಚ್ಚವನ್ನು 2016-17ನೇ ಸಾಲಿನ ಯೋಜನಾ ಲೆಕ್ಕ ಶೀರ್ಷಿಕೆ "2851-00-107-1-49(106)" ರಡಿ ಭರಿಸತಕ್ಕದ್ದು.

ಮು.ತಿ.ನೋ. . . .

ಕೇಂದ್ರ ಸರ್ಕಾರದ ಸೂಚನೆಯಂತೆ ಈ ಯೋಜನೆಯ ಪ್ರಗತಿಯನ್ನು ಕೃಷಿ ಇಲಾಖೆಯಡಿಯಲ್ಲಿ ತೋರಿಸಬೇಕೆಂದು ಸೂಚಿಸಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ತೋಇ 63 ಆಂಆಸ 2016 ದಿನಾಂಕ 17-08-2016 ಮತ್ತು ತೋಟಗಾರಿಕೆ ಇಲಾಖೆಯ ಟಿಪ್ಪಣಿ ಸಂಖ್ಯೆ: ತೋಇ 54 ತೋಯೋಕಾ 2016, ದಿನಾಂಕ 21-07-2016 ರಲ್ಲಿ ನೀಡಿರುವ ಸಹಮತಿ ಮೇರೆಗೆ ಮತ್ತು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2015, ದಿನಾಂಕ 09-04-2015 ಮತ್ತು ಎಫ್‌ಡಿ 04 ಟಿಎಫ್‌ಪಿ 2015, ದಿನಾಂಕ 09-10-2015, ಎಫ್‌ಡಿ 03 ಟಿಎಫ್‌ಪಿ 2016, ದಿನಾಂಕ 02-04-2016ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಪ್ರತ್ಯಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಎಲ್. ಚಿನ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ (ರೇಷ್ಮೆ)
ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ

<u>ಇವರಿಗೆ:</u>

1. ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕೃಷಿ ಭವನ ಬೆಂಗಳೂರು.
10. ನಿರ್ದೇಶಕರು, ಯೋಜನಾ ಇಲಾಖೆ, ಯೋಜನಾ ಸಂಯೋಜನಾ ಮತ್ತು ಮಾಹಿತಿ ವಿಭಾಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ನಿರ್ದೇಶಕರು, ಯೋಜನಾ ಇಲಾಖೆ, ಪಿ.ಎಫ್.ಆರ್. ವಿಭಾಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಹಾಗೂ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

ಮು.ತಿ.ನೋ. . . .